ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – 575 001.

ಕರ್ನಾಟಕ ಸರಕಾರ

(ಕಂದಾಯ ಇಲಾಖೆ)

Deputy Commissioner & District Magistrate's Office, Dakshina Kannada District, Mangaluru – 575 001.

ನಂ. ಎಂಎಜಿ(2)ಸಿಆರ್ 156/2021/133465/ಸಿ4/40 ದಿನಾಂಕ: 14-09-2021

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ : ಕೋವಿಡ್- 19 ನಿಯಮಗಳನ್ನು ಪಾಲಿಸಿಕೊಂಡು ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಶಾಲೆಗಳನ್ನು ತೆರೆಯುವ ಬಗ್ಗೆ.

ಉಲ್ಲೇಖ : 1) ದಿನಾಂಕ: 13-09-2021 ರಂದು ಜಿಲ್ಲಾಧಿಕಾರಿ ಕಛೇರಿಯಲ್ಲಿ ಜರುಗಿದ ಸಭೆಯ ನಡವಳಿ.

2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂ. ಸಿ4 (6)ಸ.ಪ್ರೌ.ಶಾ/ ಶಾ.ಕಾ.ಪ್ರ/23/2020-21 ದಿನಾಂಕ: 16-08-2021.

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ ಜಿಲ್ಲಾ ದಂಡಾಧಿಕಾರಿ, ದ.ಕ.

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್ ಸೋಂಕು ಪ್ರಸರಣದ ಸರಪಳಿಯನ್ನು ತುಂಡರಿಸುವ ಸಲುವಾಗಿ ಹಾಗೂ ಸಂಭಾವ್ಯ 3 ನೇ ಅಲೆಯನ್ನು ಸಮರ್ಪಕವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಸರ್ಕಾರದ ನಿರ್ದೇಶನದಂತೆ ಜಿಲ್ಲಾಡಳಿತದ ವತಿಯಿಂದ ಕಾಲಕಾಲಕ್ಕೆ ಎಲ್ಲಾ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಉಲ್ಲೇಖ (2) ರಂತೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ ಪ್ರಾರಂಭಿಸಿ ಬೋಧನಾ ತರಗತಿಗಳನ್ನು ನಡೆಸುವ ಬಗ್ಗೆ ಸುತ್ತೋಲೆಯನ್ನು ಹೊರಡಿಸಿರುತ್ತಾರೆ.

ಕೋವಿಡ್ ಸಾಂಕ್ರಾಮಿಕ ರೋಗವು ಶಿಕ್ಷಣ ವ್ಯವಸ್ಥೆಯ ಮೇಲೆ ಪ್ರಭಾವ ಬೀರಿದ್ದು, ಶೈಕ್ಷಣಿಕ ಸಮುದಾಯವನ್ನು ಹಾಲಿ ಬೋಧನ ವ್ಯವಸ್ಥೆಯಿಂದ ದೂರ ಉಳಿಯುವಂತೆ ಮಾಡಿರುತ್ತದೆ. ಶಾಲೆಗಳಲ್ಲಿ ಕಲಿಯುವುದು ಕಲಿಕೆಯ ಒಂದು ಪ್ರಮುಖ ವರ್ಗವಾಗಿದ್ದು, ಕೋವಿಡ್ ಸಾಂಕ್ರಾಮಿಕ ರೋಗದಿಂದಾಗಿ ಶಾಲೆಗಳನ್ನು ಮುಚ್ಚಿರುವುದರಿಂದ ಮಕ್ಕಳು ತಮ್ಮ ಬೆಳವಣಿಗೆಗೆ ಇದ್ದಂತಹ ಅನೇಕ ಅವಕಾಶಗಳನ್ನು ಕಳೆದುಕೊಂಡಿರುತ್ತಾರೆ. ಪ್ರಸ್ತುತ ಪರಿಸ್ಥಿತಿಯಿಂದಾಗಿ ಕಲಿಕೆಯಲ್ಲಿ ಮಕ್ಕಳು ಆಸಕ್ತಿಯನ್ನು ಕಳೆದುಕೊಂಡಿದ್ದು, ಏಕಾಗ್ರತೆಯಿಂದ ತರಗತಿಗಳಲ್ಲಿ ಭಾಗವಹಿಸಲು ವಿಫಲರಾಗುತ್ತಿದ್ದಾರೆ. ಅಲ್ಲದೇ ಮಕ್ಕಳಿಗೆ ಶಾಲಾ ಪಠ್ಯಕ್ರಮಗಳನ್ನು ಪೂರ್ಣಪ್ರಮಾಣದಲ್ಲಿ ಅಧ್ಯಯನ ಮಾಡಲು ಕೂಡ ಸಾಧ್ಯವಾಗಿರುವುದಿಲ್ಲ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಶಾಲೆಗಳನ್ನು ಕೋವಿಡ್ ನಿಯಮಗಳನ್ನು ಪಾಲಿಸಿಕೊಂಡು ತೆರೆಯುವ ಬಗ್ಗೆ ದಿನಾಂಕ: 13-09-2021 ರಂದು ಜಿಲ್ಲಾಧಿಕಾರಿಯವರ ಕಛೇರಿಯಲ್ಲಿ ಜಿಲ್ಲೆಯ ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ಈಗಾಗಲೇ ಶೇಕಡಾ 99% ರಷ್ಟು ಶಾಲಾ ಶಿಕ್ಷಕರು ಮತ್ತು ಶಾಲಾ ಸಿಬ್ಬಂದಿಗಳಿಗೆ ಕೋವಿಡ್ ಲಸಿಕೆಯನ್ನು ನೀಡಲಾಗಿರುವುದರಿಂದ ಜಿಲ್ಲೆಯಲ್ಲಿ ಶಾಲೆಗಳನ್ನು ಪ್ರಾರಂಭಿಸಿ ವಿದ್ಯಾರ್ಥಿಗಳ ಕಲಿಕೆಗೆ ತೊಂದರೆಯಾಗದಂತೆ ಕ್ರಮಕೈಗೊಳ್ಳುವುದು ಅಗತ್ಯವಾಗಿರುತ್ತದೆ. ಪ್ರಸ್ತುತ ಜಿಲ್ಲೆಯಲ್ಲಿ ಕೋವಿಡ್-19 ರ ಪಾಸಿಟಿವಿಟಿ ದರವು ಕಡಿಮೆ ಇರುವುದರಿಂದ ಜಿಲ್ಲೆಯಾದ್ಯಂತ ಶಾಲೆಗಳನ್ನು ತೆರೆದು ಭೌತಿಕ ತರಗತಿಗಳನ್ನು ಪ್ರಾರಂಭಿಸುವುದು ಮಕ್ಕಳ ಶೈಕ್ಷಣಿಕ ವ್ಯಕ್ತಿತ್ವದ ಹಿತದೃಷ್ಟಿಯಿಂದ ಅತ್ಯಾವಶ್ಯಕವಾಗಿರುತ್ತದೆ.

ಈ ಹಿನ್ನಲೆಯಲ್ಲಿ ಜಿಲ್ಲೆಯ ಪ್ರಸ್ತುತ ವಿದ್ಯಮಾನಗಳನ್ನು ಅವಲೋಕಿಸಿ ಹಾಗೂ ಮಕ್ಕಳ ಶೈಕ್ಷಣಿಕ ವ್ಯಕ್ತಿತ್ವದ ಹಿತದೃಷ್ಟಿಯಿಂ, ಕೋವಿಡ್ ಮುಂಜಾಗೃತಾ ಕ್ರಮಗಳನ್ನು ಕೈಗೊಂಡು ಶಾಲೆಗಳನ್ನು ಪ್ರಾರಂಭಿಸುವುದು ಸೂಕ್ತ ಎಂದು ಮನಗಂಡು **ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು** ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 ಹಾಗೂ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 (3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಗಿನಂತೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತೇನೆ.

1. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ದಿನಾಂಕ: 17-09-2021 ರಿಂದ 8, 9, 10 ನೇ ತರಗತಿಗಳನ್ನು ಮತ್ತು ದಿನಾಂಕ: 20-09-2021 ರಿಂದ 6 ಮತ್ತು 7 ನೇ ತರಗತಿಗಳನ್ನು ಪ್ರಾರಂಭಿಸಲು ಅನುಮತಿಸಿದೆ.
2. ಶಾಲೆಗಳಲ್ಲಿ ಕೋವಿಡ್ ಸಮುಚಿತ ವರ್ತನೆಗಳನ್ನು ಅನುಷ್ಠಾನಗೊಳಿಸುವ ಸಂಪೂರ್ಣ ಜವಾಬ್ದಾರಿಯನ್ನು ಆಯಾ ಶಾಲಾ ಮುಖ್ಯಸ್ಥರು / ಮುಖ್ಯೋಪಾಧ್ಯಾಯರಿಗೆ ವಹಿಸಲಾಗಿದೆ.
3. ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು.
4. ಕೇರಳ ರಾಜ್ಯದಿಂದ ಬರುವಂತಹ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಲ್ಲಿ ಉಳಿದುಕೊಳ್ಳಲು ಆಯಾ ಶಾಲಾ ಮುಖ್ಯಸ್ಥರು / ಮುಖ್ಯೋಪಾಧ್ಯಾಯರು ವ್ಯವಸ್ಥೆ ಮಾಡಬೇಕು ಅಥವಾ ಅಂತಹ ವಿದ್ಯಾರ್ಥಿಗಳು ಆನ್ ಲೈನ್ ತರಗತಿಯಲ್ಲಿ ಭಾಗವಹಿಸುವಂತೆ ಕ್ರಮವಹಿಸುವುದು.
5. ಶಾಲೆಗಳು ಪ್ರಾರಂಭಗೊಂಡ ನಂತರ ಸಂಬಂಧಪಟ್ಟ ಶಾಲಾ ಮುಖ್ಯಸ್ಥರು ಮಕ್ಕಳಲ್ಲಿ ಶುಲ್ಕ ಪಾವತಿಸಲು ಒತ್ತಾಯಿಸದಂತೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಗಳೂರು ಇವರು ಸಂಬಂಧಪಟ್ಟವರಿಗೆ ನಿರ್ದೇಶಿಸುವುದು.
6. ಶಾಲೆಗಳು ಪ್ರಾರಂಭವಾದ ಬಳಿಕ ಭೌತಿಕ ತರಗತಿಗಳ ಜೊತೆಗೆ ಆನ್ ಲೈನ್ ತರಗತಿಗಳನ್ನು ಕೂಡಾ ಮುಂದುವರೆಸುವುದು ಹಾಗೂ ಭೌತಿಕ ತರಗತಿಗಳಿಗೆ ಹಾಜರಾಗುವ ಬಗ್ಗೆ ಮಕ್ಕಳ ಪೋಷಕರಿಂದ ಅನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.
7. ಎಲ್ಲಾ ಶಿಕ್ಷಕರು ಹಾಗೂ ಶಾಲಾ ಸಿಬ್ಬಂದಿಗಳು RT-PCR ಟೆಸ್ಟ್ ಮಾಡಿಸಿ, ನೆಗೆಟಿವ್ ಪ್ರಮಾಣ ಪತ್ರದೊಂದಿಗೆ ಹಾಜರಾಗುವುದು.
8. ಕೇರಳ ರಾಜ್ಯದಿಂದ ದಿನಂಪ್ರತಿ ಬರುವಂತಹ ಶಿಕ್ಷಕರು ಹಾಗೂ ಶಾಲಾ ಸಿಬ್ಬಂದಿಗಳು ಕೋವಿಡ್ ಲಸಿಕೆ (2 ಡೋಸ್) ಪಡೆದಿದ್ದರೂ ಕೂಡ ಪ್ರತೀ 7 ದಿನಗಳಿಗೊಮ್ಮೆ RT-PCR ಟೆಸ್ಟ್ ಮಾಡಿಸಿ, ನೆಗೆಟಿವ್ ಪ್ರಮಾಣ ಪತ್ರದೊಂದಿಗೆ ಹಾಜರಾಗುವುದು.
9. ಶಾಲೆಗಳಲ್ಲಿ ಕೋವಿಡ್ ನಿಯಮಗಳು ಪಾಲನೆಯಾಗುತ್ತಿರುವ ಬಗ್ಗೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಗಳೂರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೇಲ್ವಿಚಾರಣೆಯನ್ನು ನಡೆಸುವುದು.

ಮೇಲಿನ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದೆ. ಈ ಆದೇಶವನ್ನು ದಿನಾಂಕ: 14-09-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರ್ಕಾರ ಜಿಲ್ಲಾ ದಂಡಾಧಿಕಾರಿ, ದ.ಕ.

14/09/2021

**ಡಾ|| ರಾಜೇಂದ್ರ ಕೆ.ವಿ.,** ಭಾ.ಆ.ಸೇ.,
**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,**
**ಹಾಗೂ ಅಧ್ಯಕ್ಷರು,**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.**

ರಿಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.

Website: www.dk.nic.in Phone: 0824-2220588 Fax: 0824-2441564 Email: dc.mnglr@gmail.com

3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
4. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ.
5. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
6. ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಗಳೂರು.
7. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳು.
8. ಜಿಲ್ಲೆಯ ತಾಲೂಕು ಆರೋಗ್ಯಾಧಿಕಾರಿಗಳು.
9. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.
10. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು - ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಗಳೂರು ಇವರ ಮೂಲಕ

DISTRICT MAGISTRATE, D.K.
GOVT. OF KARNATAKA
ಕರ್ನಾಟಕ ಸರ್ಕಾರ
ಜಿಲ್ಲಾ ದಂಡಾಧಿಕಾರಿ, ದ.ಕ